# ಇಂದಿನ ಶಿಕ್ಷಣದಲ್ಲಿ ಸಂಸ್ಕಾರದ ಕೊರತೆ: ಹೊರಟ್ಟಿ

ಮುಂಡಗೋಡ, ಅ.31: ಇಂದಿನ ಶಿಕ್ಷಣದಲ್ಲಿ ಸಂಸ್ಕಾರದ ಕೊರತೆ ಇದೆ. ತಂದೆ ತಾಯಿಗಳು ಪಡುವ ಕಷ್ಟಗಳ ಬಗ್ಗೆ ಮಕ್ಕಳಿಗೆ ತಿಳಿದರೆ ಮಾತ್ರ ಸಮಾಜ ಹಾಗೂ ಜೀವನ ಎಂದರೇನು ಎಂಬ ಅರಿವು ಮಕ್ಕಳಲ್ಲಿ ಬರುತ್ತದೆ. ಮಕ್ಕಳನ್ನು ವಸತಿ ಶಾಲೆಗಳಲ್ಲಿಟ್ಟು ಶಿಕ್ಷಣ ನೀಡುವ ಪದ್ಧತಿಯಿಂದ ಮಕ್ಕಳಲ್ಲಿ ಸಂಸ್ಕಾರದ ಕೊರತೆಯಾಗಲು ಕಾರಣವಾಗಿದೆ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಮಂಗಳವಾರ ಇಲ್ಲಿಯ ನಗರಸಭಾ ಭವನದಲ್ಲಿ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ ಹಾಗೂ ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ (ಮುಂಡಗೋಡ ಘಟಕ)ದಿಂದ ನಡೆದ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಅಭಿನಂದನಾ ಸಮಾರಂಭ ಮತ್ತು ಶೈಕ್ಷಣಿಕ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಸಮಾಜ ಇಂದು ತೀವ್ರ ಕ್ಲಿಷ್ಟಕರ ಪರಿಸ್ಥಿತಿ ಎದುರಿಸುತ್ತಿದೆ. ಶಿಕ್ಷಣ ಕ್ಷೇತ್ರವಂತೂ ಸಮಸ್ಯೆಯಿಂದ ಕೂಡಿದೆ. ರಾಷ್ಟ್ರೀಯ ಶಿಕ್ಷಣ ನೀತಿಯಿಂದ ಶಿಕ್ಷಣ ಇಲಾಖೆ, ಶಿಕ್ಷಕರು, ವಿದ್ಯಾರ್ಥಿಗಳು, ಪಾಲಕರು ಸೇರಿದಂತೆ ಯಾರು ಕೂಡ ನೆಮ್ಮದಿಯಿಂದರಲು ಅಸಾಧ್ಯವಾದಷ್ಟು ಸಮಸ್ಯೆಗಳು ಉದ್ಭವವಾಗಿವೆ. ಬೇರೆ ಬೇರೆ ದೇಶಗಳಲ್ಲಿ ಸರ್ಕಾರಗಳು ಬದಲಾಗುತ್ತವೆ





ವಿನ: ನೀತಿ ಬದಲಾಗುವುದಿಲ್ಲ. ಭಾರತದಲ್ಲಿ ಸರ್ಕಾರದ ಜೊತೆ ಜೊತೆಗೆ ಸರ್ಕಾರದ ನೀತಿಗಳು ಬದಲಾಗುತ್ತವೆ. ಒಂದೊಂದು ಸರ್ಕಾರದಲ್ಲಿ ಒಂದೊಂದು ನೀತಿಗಳು ಜಾರಿಯಾಗುವುದರಿಂದ ಶಿಕ್ಷಣ ಕ್ಷೇತ್ರ ತೊಂದರೆ ಅನುಭವಿಸುತ್ತದೆ ಎಂದು ವಿಷಾದ ವ್ಯಕ್ತಪಡಿಸಿದರು.

ಸಾನ್ನಿಧ್ಯ ವಹಿಸಿದ್ದ ಅತ್ತಿವೇರಿ ಬಸವ ಧಾಮದ ಮಾತೆ ಬಸವೇಶ್ವರಿ ಮಾತನಾಡಿ, ಶಿಕ್ಷಕರು ಹಾಗೂ ಬಸವರಾಜ ಹೊರಟ್ಟಿ ನಡುವೆ ಅವಿನಾಭಾವ ಸಂಬಂಧವಿದೆ. ಶಿಕ್ಷಕರ ಸಂಘಟನೆಯಲ್ಲಿ ಶಕ್ತಿ ಇದೆ ಎಂಬುವುದನ್ನು ಬಸವರಾಜ ಹೊರಟ್ಟಿ ತೋರಿಸಿಕೊಟ್ಟಿದ್ದಾರೆ. 7 ಭಾರಿ ಶಿಕ್ಷಕರ ಕ್ಷೇತ್ರದಿಂದ ಸ್ಪರ್ಧಿಸಿ ಗೆಲುವು ಸಾಧಿಸುವುದು ದಾಖಲೆಯೇ ಸರಿ. ದಕ್ಷ, ಚಿಂತಕ ಹಾಗೂ ಯಾವುದೇ ಕಪ್ಪು ಚುಕ್ಕೆ ಇಲ್ಲದಂತ ಬಸವರಾಜ ಹೊರಟ್ಟಿ ಬಗ್ಗೆ ಶಿಕ್ಷಕರಿಗೂ ಕೂಡ ಪ್ರೀತಿ ಗೌರವವಿದೆ. 45 ವರ್ಷಗಳ ಕಾಲ ಹೋರಾಟದ ಮೂಲಕ ಗುರುತಿಸಿಕೊಂಡವರು. ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದ್ದು, ಶಿಕ್ಷಕರು ಮನಸ್ಸು ಮಾಡಿದರೆ ಭವ್ಯ ಭಾರತ ನಿರ್ಮಾಣ ಮಾಡಬಹುದು. ಆದರೆ ಇತ್ತೀಚಿನ ದಿನಗಳಲ್ಲಿ ಶಿಕ್ಷಣ ಕ್ಷೇತ್ರ ಪ್ರಾಮುಖ್ಯತೆ ಕಳೆದುಕೊಳ್ಳುತ್ತಿರುವುದು ಶೋಚನಿಯ ಎಂದರು.

ಧಾರವಾಡ ಶಿಕ್ಷಣ ತಜ್ಞ ಸುರೇಶ ಕುಲಕರ್ಣಿ ರಾಷ್ಟ್ರೀಯ ಶಿಕ್ಷಣ ನೀತಿಯ ಸಾಧಕ ಬಾಧಕಗಳ ಬಗ್ಗೆ ಉಪನ್ಯಾಸ ನೀಡಿದರು.

ಶಿರಸಿ ಶೈಕ್ಷಣಿಕ ಜಿಲ್ಲೆ ಉಪ ನಿರ್ದೇಶಕ ದಿವಾಕರ ಶೆಟ್ಟಿ, ತಹಶೀಲ್ದಾರ್ ಶ್ರೀಧರ ಮುಂದಲಮನಿ, ಲೋಯೋಲಾ ಶಾಲೆ ಪ್ರಾಧ್ಯಾಪಕ ಜಾನ್ಸನ್ ಪಿಂಟೊ, ವಿ.ವಿ ನಡುವಿನಮನಿ ಮುಂತಾದವರು ಮಾತನಾಡಿದರು. ವಿನಾಯಕ ಶೇಟ್ ಪ್ರಾಸ್ತಾವಿಕ ಮಾತನಾಡಿದರು. ಎಸ್.ಡಿ ಮುಡೆಣ್ಣವರ ಸ್ವಾಗತಿಸಿದರು. ಸುರೇಶ ಪೂಜಾರ, ರಮೇಶ ಅಂಬಿಗೇರ ನಿರೂಪಣೆ ಮಾಡಿದರು.

Uttara Kannada Local Paper 01.09.2021

# ಶಿಕ್ಷಣ ಇಲಾಖೆಯಲ್ಲಿ ಹತ್ತಾರು ಸಮಸ್ಯೆ: ಹೊರಟ್ಟಿ



ಮುಂಡಗೋಡ: ಶಿಕ್ಷಣ ಇಲಾಖೆಯಲ್ಲಿ ಇರುವಷ್ಟು ಸಮಸ್ಯೆಗಳು ಬೇರೆ ಯಾವ ಇಲಾಖೆಯಲ್ಲಿ ಇಲ್ಲ. ಸಮಸ್ಯೆ ಎಂಬುದು ಹನುಮಂತನ ಬಾಲದ ಹಾಗೆ ಬೆಳೆಯುತ್ತಾ ಸಾಗುತ್ತಿದೆ ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಮಂಗಳವಾರ ಹೇಳಿದರು.

ಪಟ್ಟಣ ಪಂಚಾಯತ ಸಭಾ ಭವನದಲ್ಲಿ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ ಹಾಗೂ ರಾಜ್ಯ ಪ್ರೌಢಶಾಲಾ ಸಹ ಶಿಕ್ಷಕರ ಸಂಘದವರು ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭ ಹಾಗೂ ಶೈಕ್ಷಣಿಕ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣ ಕ್ಷೇತ್ರದಲ್ಲಿ ಸಾಕಷ್ಟು ಸಮಸ್ಯೆಗಳಿವೆ. ಎಲ್ಲವೂ ಯಾವಾಗ ಬಗೆ ಹರಿಯುತ್ತವೆ ಎಂಬುದನ್ನು ನೋಡಬೇಕಿದೆ. ಸರಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳು ಇಂದು ಹಲವಾರು ಸಂಕಷ್ಟಗಳನ್ನು ಎದುರಿಸುತ್ತಿವೆ. ಒಂದೊಂದು ಕಡೆಗೆ ಒಂದೊಂದು ತರಹದ ಸಮಸ್ಯೆಗಳಿವೆ ಎಂದರು.

ಅತ್ತಿವೇರಿಯ ಬಸವೇಶ್ವರಿ ಮಾತಾಜಿ ಉಪಸ್ಥಿತರಿದ್ದು ಮಾತನಾಡಿದರು. ಹತ್ತನೆ ತರಗತಿಯಲ್ಲಿ ತಾಲೂಕಿಗೆ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ನಿವೃತ್ತಿ ಹೊಂದಿದ ಶಿಕ್ಷಕರಿಗೆ ಸನ್ಮಾನಿಸಲಾಯಿತು.

ಈ ವೇಳೆ ತಹಶೀಲ್ದಾರ್ ಶ್ರೀಧರ ಮುಂದಲಮನೆ, ಡಿಡಿಪಿಐ. ದಿವಾಕರ ಶೆಟ್ಟಿ, ಶಿಕ್ಷಣಾಧಿಕಾರಿ ವಿ.ವಿ.ನಡುವಿನಮನಿ, ಜಿ.ಆರ್.ಭಟ್ಟ, ಪ್ರಕಾಶ ನಾಯ್ಕ, ನಾರಾಯಣ, ದಿನೇಶ ನಾಯ್ಕ, ಸುಭಾಸ ಡೋರಿ, ಜಾನ್ಸನ್ ಪಿಂಟೋ, ಸುರೇಶ ಕುಲಕರ್ಣಿ, ಜಿ.ಎನ್.ನಾಯ್ಕ, ವೀರಭದ್ರಗೌಡ ಪಾಟೀಲ, ಕೆ.ಟಿ.ಶೆಟ್ಟರ, ಎಸ್.ಡಿ.ಮುಡೆಣ್ಣವರ, ಡಾ. ರಮೇಶ ಅಂಬಿಗೇರ, ದೀಪಕ ಲೋಕಣ್ಣವರ, ಸುರೇಶ ಪೂಜಾರಿ, ರಮೇಶ ರಾಠೋಡ ಸೇರಿದಂತೆ ಮುಂತಾದವರಿದ್ದರು.

Uttara Kannada Local Paper 01.09.2021